ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಬಿದಾಯಿ ಯೋಜನೆಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

733 (662) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಲ್ಲಿ ಬಿದಾಯಿ ಯೋಜನೆಯ ಅನ್ವಯ ಎಷ್ಟು ಕುಟುಂಬಗಳಿಗೆ ಅನುದಾನ ನೀಡಲಾಗಿದೆ;

(ಆ) ಬಿದಾಯಿ ಯೋಜನೆಯ ಫಲಾನುಭವಿಯಾಗಲು ಇರುವ ನಿಬಂಧನೆಗಳೇನು ;

(ಇ) ಬಿದಾಯಿ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳಿಗೆ ಅನುದಾನ ನೀಡಿರುವ ಕಾರಣ ರೂ.330 ಕೋಟಿಗೂ ಹೆಚ್ಚು ಮೊತ್ತದ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಈ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಬಿದಾಯಿ ಯೋಜನೆಯ ಫಲಾನುಭವಿಯಾಗಲು ಹೊಂದಿರಬೇಕಾದ ಕನಿಷ್ಠ ವಯೋಮಿತಿ ಎಷ್ಟು; ಕನಿಷ್ಠ ವಯಸ್ಸಿಗಿಂತ ಕಡಿಮೆ ವಯಸ್ಸಿನ ವಧುಗಳಿಗೆ ಬಿದಾಯಿ ಯೋಜನೆಯಲ್ಲಿ ಅನುದಾನ ಬಿಡುಗಡೆ ಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ನಿಯಮಗಳಿಗೆ ವಿರುದ್ಧವಾಗಿ ನೀಡಿರುವ ಅನುದಾನವನ್ನು ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?